DECEMBER 12, 2024

AKASHAVANI - DHARWAD

PRADESH SAAMACHARA (KANNADA) 12 P.M

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದುತ್ತಿರುವವರು ಆರತಿ ದೇವಶಿಖಾಮಣಿ

<><><>

ಸ್ವಾತಂತ್ರ್ಯ, ಸಮಾನತೆ ಹಾಗೂ ಭಾತೃತ್ವ, ಮಾನವ ಹಕ್ಕುಗಳ ಅಡಿಗಲ್ಲು ಎಂದು ಧಾರವಾಡ ಜಿಲ್ಲಾ ಗ್ರಾಹಕರು, ವಿವಾದ ಮತ್ತು ಪರಿಹಾರ ಆಯೋಗದ ಅಧ್ಯಕ್ಷರಾದ ಈಶಪ್ಪ ಭೂತೆ ಹೇಳಿದ್ದಾರೆ. ಧಾರವಾಡದಲ್ಲಿ ಮಾನವ ಹಕ್ಕುಗಳ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನ್ಯಾಯದ ದೃಷ್ಟಿಯಲ್ಲಿ ಸರ್ವರು ಸಮಾನರು ಎಂಬ ಭಾವನೆ ಬೆಳೆಸಬೇಕು. ಕಾನೂನು ರೀತಿ ಹಕ್ಕು ಒದಗಿಸುವುದಕ್ಕಿಂತ ಪರಸ್ಪರ ಪ್ರೀತಿ, ಆತ್ಮೀಯತೆ, ನಾವೆಲ್ಲ ಒಂದು ಎಂಬ ಭಾವನೆ ನಮ್ಮಲ್ಲಿ ಬೆಳೆದರೆ, ದೇಶದ ಪ್ರಗತಿ ಸಾಧ್ಯ ಎಂದರು.

<><><>

ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರದ ಸಮುದ್ರದಲ್ಲಿ ಮೃತಪಟ್ಟ ಕೋಲಾರ ಜಿಲ್ಲೆಯ ಮುಳುಬಾಗಿಲು ತಾಲೂಕಿನ ಎಂ.ಕೊತ್ತೂರು ಗ್ರಾಮದ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿನಿಯರ ಪಾರ್ಥಿವ ಶರೀರಗಳಿಗೆ ಇಂದು ಕೋಲಾರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಅಕ್ರಂ ಪಾಷ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಅಂತಿಮ ನಮನ ಸಲ್ಲಿಸಿದರು. ನಂತರ ಅವರ ಕುಟುಂಬಗಳಿಗೆ ಮೃತದೇಹಗಳನ್ನು ಹಸ್ತಾಂತರಿಸಲಾಯಿತು. ಮೃತರ ಕುಟುಂಬಕ್ಕೆ ಸಾಂತ್ವನ ಸೂಚಿಸಿದ ಜಿಲ್ಲಾಧಿಕಾರಿಗಳು ಘಟನೆಗೆ ಸಂಬಂಧಿಸಿದಂತೆ ಪ್ರಾಂಶುಪಾಲರನ್ನು ಅಮಾನತ್ತು ಮಾಡಲಾಗಿದೆ. ಉಳಿದ ಅತಿಥಿ ಶಿಕ್ಷಕರನ್ನು ಕೆಲಸದಿಂದ ವಜಾ ಮಾಡಲಾಗಿದೆ. ಸರ್ಕಾರವು ಘೋಷಿಸಿದ ತಲಾ 5 ಲಕ್ಷ ರೂಪಾಯಿ ಪರಿಹಾರ ಈಗಾಗಲೇ ಜಿಲ್ಲಾಧಿಕಾರಿಗಳ ಖಾತೆಗೆ ಜಮೆಯಾಗಿದ್ದು, ಇಂದು ಚೆಕ್ ಮುಖಾಂತರ ಮೃತ ವಿದ್ಯಾರ್ಥಿಗಳ ಪೋಷಕರಿಗೆ ತಲುಪಿಸಲಾಗುವುದು ಎಂದರು.

<><><>

ಕಳೆದ ಜುಲೈನಲ್ಲಿ ವಯನಾಡ್‌ನಲ್ಲಿ ಸಂಭವಿಸಿದ ಭೂ ಕುಸಿತದಿಂದ ಸಂತ್ರಸ್ತರಾದ ಕುಟುಂಬಗಳಿಗೆ, 100 ಮನೆಗಳನ್ನು ನಿರ್ಮಿಸಲು, ಅಗತ್ಯವಾದ ಭೂಮಿ ಖರೀದಿಯ ವೆಚ್ಚವನ್ನು ಭರಿಸುವುದಾಗಿ, ಕೇರಳದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರಿಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

ಭೂ ಕುಸಿತದಿಂದ ಬದುಕಿನ ನೆಲೆ ಕಳೆದುಕೊಂಡ ಜನರಿಗೆ ಹೊಸ ಬದುಕು ಕಟ್ಟಿಕೊಡುವ ದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><><>

ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ, ಎಲ್ಲ ವಲಯಗಳಲ್ಲಿ ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ, ಇದೇ 20ನೇ ತಾರೀಖು ಕೊನೆಗೊಳ್ಳಲಿದೆ ಎಂದು, ವಿಶೇಷ ಆಯುಕ್ತ ವಿಕಾಸ ಕಿಶೋರ ಸುರಳ್ಕರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಪಾಲಿಕೆಯ ಎಲ್ಲ 8 ವಲಯಗಳಲ್ಲಿ, ಮೊಬೈಲ್ ತಂತ್ರಾಂಶದ ಮೂಲಕ ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ನಡೆಸಲಾಗುತ್ತಿದೆ. ಇದು ವರೆಗೆ ವಲಯವಾರು 23 ಸಾವಿರದ 407 ಜನ ಬೀದಿ ಬದಿ ವ್ಯಾಪಾರಿಗಳನ್ನು ಸಮೀಕ್ಷೆ ಮೂಲಕ ಗುರುತಿಸಲಾಗಿದೆ ಎಂದರು.

<><><>

ಖ್ಯಾತ ಹಿಂದೂಸ್ಥಾನಿ ಗಾಯಕ, ಪದ್ಮಶ್ರೀ ಪುರಸ್ಕೃತ, ಧಾರವಾಡದ ಪಂಡಿತ ಎಂ.ವೆಂಕಟೇಶಕುಮಾರ ಅವರಿಗೆ 'ಆಳ್ವಾಸ್ ವಿರಾಸತ್ –2024' ಪ್ರಶಸ್ತಿಯನ್ನು, ದಕ್ಷಿಣಕನ್ನಡ ಜಿಲ್ಲೆ, ಮೂಡುಬಿದರೆಯಲ್ಲಿ ಗಣ್ಯರು ಪ್ರದಾನ ಮಾಡಿ, ಗೌರವಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಪಂಡಿತ ಎಂ.ವೆಂಕಟೇಶಕುಮಾರ, ಬಡ ವಿದ್ಯಾರ್ಥಿಗಳಿಗೆ ಆಶ್ರಯ ನೀಡಿದ, ಗದುಗಿನ ಶ್ರೀ ವೀರೇಶ್ವರಪುಣ್ಯಾಶ್ರಮದ, ಗುರು ಪಂಡಿತ ಪುಟ್ಟರಾಜ ಗವಾಯಿಗಳಿಗೆ ಈ ಪ್ರಶಸ್ತಿ ಅರ್ಪಿಸುವುದಾಗಿ ಹೇಳಿದರು.

<><><>

ತಮಿಳುನಾಡು ಸರ್ಕಾರ ಪ್ರದಾನಿಸುವ, 2024ನೇ ಸಾಲಿನ, ಪ್ರತಿಷ್ಠಿತ 'ವೈಕಂ' ಪ್ರಶಸ್ತಿಗೆ ಸಾಹಿತಿ, ಪದ್ಮಶ್ರೀ ಪುರಸ್ಕೃತ, ಮೈಸೂರಿನ ದೇವನೂರು ಮಹಾದೇವ ಆಯ್ಕೆಯಾಗಿದ್ದಾರೆ. ಪ್ರಶಸ್ತಿ 5 ಲಕ್ಷ ರೂಪಾಯಿ ನಗದು ಹಾಗೂ ಸ್ವರ್ಣ ಪದಕವನ್ನು ಒಳಗೊಂಡಿದೆ. ಇಂದು ಕೇರಳದ ವೈಕಂನಲ್ಲಿ ನಡೆಯಲಿರುವ, ವೈಕಂ ಹೋರಾಟದಲ್ಲಿ ಪೆರಿಯಾರ್ ಪಾಲ್ಗೊಂಡಿದ್ದರ, ಶತಮಾನೋತ್ಸವ ಕಾರ್ಯಕ್ರಮದ ಸಮಾರೋಪದಲ್ಲಿ, ಪೆರಿಯಾರ್ ಸ್ಮಾರಕದ ಉದ್ಘಾಟನಾ ಕಾರ್ಯಕ್ರಮದಲ್ಲಿ, ಗಣ್ಯರು ಪ್ರದಾನ ಮಾಡಲಿದ್ದಾರೆ.

<><><>

ಮಂಗಳೂರಿನ ರಂಗ ಸಂಗಾತಿ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕೀರ್ತಿಶೇಷ ಕುಂಬ್ಳೆ ಸುಂದರ ರಾವ್ ಸಂಸ್ಮರಣ ವೇದಿಕೆ, ಜಂಟಿಯಾಗಿ ನೀಡುವ, ಕುಂಬ್ಳೆ ಸುಂದರ ರಾವ್ ಸಂಸ್ಮರಣ ಪ್ರಶಸ್ತಿಗೆ, ಹಿರಿಯ ಯಕ್ಷಗಾನ ಕಲಾವಿದ ಅರುವ ಕೊರಗಪ್ಪ ಶೆಟ್ಟಿ ಆಯ್ಕೆಯಾಗಿದ್ದಾರೆ. ನಾಡಿದ್ದು, 14 ರಂದು, ಮಂಗಳೂರಿನ ಕೆನರಾ ಪದವಿಪೂರ್ವ ಮಹಾವಿದ್ಯಾಲಯದ ಸಭಾಂಗಣದಲ್ಲಿ, ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ.

<><><>

ಧಾರವಾಡದ, ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ, 'ಕರ್ನಾಟಕದ ದಾರ್ಶನಿಕ ಪಂಥಗಳು ಸರಣಿ'ಯಲ್ಲಿ, ಇಂದು ಸಂಜೆ 6 ಗಂಟೆಗೆ, 'ಶರಣ ಪಂಥ'ದ ಕುರಿತು, ಪ್ರೊಫೆಸರ್ ರಹಮತ್ ತರಿಕೆರೆ ವಿಶೇಷ ಉಪನ್ಯಾಸ ನೀಡಲಿದ್ದಾರೆ.

<><><>

ಪ್ರಯಾಣಿಕರ ಅನುಕೂಲಕ್ಕಾಗಿ, ಬೆಂಗಳೂರಿನ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್‌ನಿಂದ ಹೌರಾ ನಿಲ್ದಾಣಕ್ಕೆ ಒನ್ ವೇ ಎಕ್ಸ್‌ಪ್ರೆಸ್ ವಿಶೇಷ ರೈಲು ಸಂಚರಿಸಲಿದೆ ಎಂದು, ನೈಋತ್ಯ ರೈಲ್ವೆಯ ಪ್ರಕಟಣೆ ತಿಳಿಸಿದೆ.

<><><>

ಮನೆ ಮತ್ತು ವಾಣಿಜ್ಯ ಸಂಕೀರ್ಣಗಳ ಮೇಲೆ, ಸೋಲಾರ್ ರೂಫ್ ಟಾಪ್ ಅಳವಡಿಸಿ, ಉಚಿತ ವಿದ್ಯುತ್ ಪಡೆದುಕೊಳ್ಳಲು, ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆ ಫಲಾನುಭವಿಯಾಗುವಂತೆ, ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕೋರಿದ್ದಾರೆ.

<><><>

ಧಾರವಾಡದ ರ್‍ಯಾಪಿಡ್ ಸಂಸ್ಥೆ ಹಾಗೂ ವಿದ್ಯಾಗಿರಿಯ ಜೆ.ಎಸ್.ಎಸ್. ಅಧ್ಯಯನ ಸಂಸ್ಥೆ, ನಾಡಿದ್ದು 15ನೇ ತಾರೀಖು, ಬೆಳಗ್ಗೆ 8:30 ರಿಂದ, ಕಾಲೇಜು ಆವರಣದಲ್ಲಿ ಉದ್ಯೋಗ ಮೇಳ ಆಯೋಜಿಸಿದೆ.

<><><>

ಕರ್ನಾಟಕ ಸೇರಿದಂತೆ, ದೇಶದ ನಾನಾ ರಾಜ್ಯಗಳ ಅಡಕೆ ಬೆಳೆಗಾರರ ಹಿತದೃಷ್ಟಿಯಿಂದ, ಅಡಕೆ ಆಮದು ನಿಷೇಧಿಸುವಂತೆ, ದಾವಣಗೆರೆ ಸಂಸದರಾದ ಪ್ರಭಾ ಮಲ್ಲಿಕಾರ್ಜುನ, ಲೋಕಸಭೆಯಲ್ಲಿ ಮನವಿ ಮಾಡಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>